# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಗ್ರಾಮ ಪಂಚಾಯತ್ ಗ್ರಂಥಾಲಯಗಳ ಪರಿಣಾಮಕಾರಿ ನಿರ್ವಹಣೆಗೆ ಜಿಲ್ಲಾ ಹಾಗೂ ಗ್ರಾಮ ಪಂಚಾಯತ್ ಮಟ್ಟದ ಸಲಹಾ ಸಮಿತಿಗಳನ್ನು ರಚಿಸುವ ಬಗ್ಗೆ.

**ಓದಲಾಗಿದೆ:-** ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 790 ಗ್ರಾಪಂಅ 2019 ಬೆಂಗಳೂರು, ದಿನಾಂಕ:18.02.2020.

****

**ಪ್ರಸ್ತಾವನೆ:**

ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವಾಲಯದ ಸಾರ್ವಜನಿಕ ಗ್ರಂಥಾಲಯ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿದ್ದ ಗ್ರಾಮ ಪಂಚಾಯತ್ ಗ್ರಂಥಾಲಯಗಳನ್ನು 2019 ರಿಂದ ಗ್ರಾಮ ಪಂಚಾಯಿತಿಗಳ ವತಿಯಿಂದ ನಿರ್ವಹಿಸಲು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವಶಕ್ಕೆ ನೀಡಲಾಗಿದೆ. ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಗ್ರಂಥಾಲಯಗಳಿಗೆ ಮೂಲ ಸೌಕರ್ಯಗಳನ್ನು ಹೆಚ್ಚಿಸಿ, ಹೊಸ ಪುಸ್ತಕಗಳು, ಕಂಪ್ಯೂಟರ್‌ಗಳು, ಪುಸ್ತಕ ಕಪಾಟುಗಳು, ಪೀಠೋಪಕರಣಗಳು ಮುಂತಾದ ಸೌಕರ್ಯಗಳನ್ನು ಒದಗಿಸಲು ಹಾಗೂ ಗ್ರಾಮದ ಯುವಕರು ಯುವತಿಯರು, ಗೃಹಿಣಿಯರು, ಹಿರಿಯ ನಾಗರೀಕರಗಳು ಹಾಗೂ ವಿದ್ಯಾರ್ಥಿಗಳು ಹೆಚ್ಚಿನ ಪ್ರಮಾಣದಲ್ಲಿ ಗ್ರಂಥಾಲಯದ ಸದುಪಯೋಗ ಪಡೆಯುವಂತಾಗಲು ಅವಶ್ಯ ಕ್ರಮಗಳನ್ನು ಕೈಗೊಳ್ಳುವುದು ಅಗತ್ಯವಾಗಿದೆ. ಗ್ರಂಥಾಲಯಗಳು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಜ್ಞಾನ ಕೇಂದ್ರಗಳಾಗಿ ಕಾರ್ಯನಿರ್ವಹಿಸಿದ್ದಲ್ಲಿ ಎಲ್ಲಾ ವರ್ಗದ ಜನರಿಗೆ ಅವಶ್ಯವಿರುವ ಮಾಹಿತಿಗಳು ಸ್ಥಳೀಯವಾಗಿ ದೊರೆಯುವಂತೆ ಮಾಡಬಹುದಾಗಿದೆ. ಗ್ರಾಮ ಪಂಚಾಯಿತಿಗಳು ತಮ್ಮ ವತಿಯಿಂದ ಈ ಸೌಕರ್ಯಗಳನ್ನು ಒದಗಿಸಲು ಮುತುವರ್ಜಿವಹಿಸಬಹುದಾಗಿದೆ, ಜೊತೆಗೆ ಸ್ಥಳೀಯ ಸಂಘ ಸಂಸ್ಥೆಗಳು, ಗ್ರಾಮದ ಉದ್ಯೋಗಸ್ಥ ವ್ಯಕ್ತಿಗಳು, ವಾಣಿಜ್ಯೋದ್ಯಮಿಗಳಿಂದ ಸಹ ವಂತಿಕೆ ರೂಪದಲ್ಲಿ ಈ ಸೌಲಭ್ಯಗಳನ್ನು ಪಡೆಯಲು ಸಹ ಅವಕಾಶವಿರುತ್ತದೆ.

ಈ ಹಿನ್ನೆಲೆಯಲ್ಲಿ ಗ್ರಾಮೀಣ ಗ್ರಂಥಾಲಯಗಳನ್ನು ಸಂಪೂರ್ಣ ಜನಸ್ನೇಹಿಯಾಗಿಸಲು ಅವಶ್ಯ ಸಲಹೆ, ಮಾರ್ಗದರ್ಶನ ನೀಡಲು ಜಿಲ್ಲಾ ಹಾಗೂ ಗ್ರಾಮ ಪಂಚಾಯತ್ ಮಟ್ಟದಲ್ಲಿ ಸಲಹಾ ಸಮಿತಿಗಳನ್ನು ರಚಿಸಲು ಸರ್ಕಾರವು ನಿರ್ಧರಿಸಿದೆ.

ಅದರಂತೆ ಈ ಕೆಳಕಂಡ ಆದೇಶ

## ಸರ್ಕಾರದ ಆದೇಶ ಸಂಖ್ಯೆ:ಕಪಂರಾಆ/ಅಭಿವೃದ್ಧಿ/169/2023 ಬೆಂಗಳೂರು, ದಿನಾಂಕ:14.07.2023.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಗ್ರಾಮ ಪಂಚಾಯತ್ ಗ್ರಂಥಾಲಯಗಳ ಪರಿಣಾಮಕಾರಿ ನಿರ್ವಹಣೆಗೆ ಜಿಲ್ಲಾ ಹಾಗೂ ಗ್ರಾಮ ಪಂಚಾಯತ್ ಮಟ್ಟದ ಸಲಹಾ ಸಮಿತಿಗಳನ್ನು ಈ ಕೆಳಕಂಡಂತೆ ರಚನೆ ಮಾಡಿ ಆದೇಶಿಸಿದೆ.

**ಜಿಲ್ಲಾ ಮಟ್ಟದ ಪುಸ್ತಕ ಆಯ್ಕೆ ಮತ್ತು ಖರೀದಿ ಹಾಗೂ ಸಲಹಾ ಸಮಿತಿ:**

| | | |
|---|---|---|
| 1) | ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ | ಅಧ್ಯಕ್ಷರು |
| 2) | ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ-(ಆಡಳಿತ) | ಸದಸ್ಯರು |
| 3) | ಮುಖ್ಯ ಗ್ರಂಥಾಲಯಾಧಿಕಾರಿ, ಜಿಲ್ಲಾ ಕೇಂದ್ರ ಗ್ರಂಥಾಲಯ. | ಸದಸ್ಯ ಕಾರ್ಯದರ್ಶಿ |
| 4) | ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ | ಸದಸ್ಯರು |
| 5) | ಉಪ ನಿರ್ದೇಶಕರು, ಆಡಳಿತ, ಶಾಲಾ ಮತ್ತು ಸಾಕ್ಷರತಾ ಶಿಕ್ಷಣ ಇಲಾಖೆ | ಸದಸ್ಯರು |
| 6) | ಜಿಲ್ಲಾ ಅಂಗವಿಕಲರ ಕಲ್ಯಾಣ ಅಧಿಕಾರಿ | ಸದಸ್ಯರು |
| 7) | ಸ್ಥಳೀಯ ಬರಹಗಾರರು, ಸಾಹಿತಿಗಳು, ಕವಿಗಳು ಮತ್ತು ಪತ್ರಕರ್ತರು | ಸದಸ್ಯರು (ಗರಿಷ್ಠ 4) |

**ಗ್ರಾಮ ಪಂಚಾಯತ್ ಮಟ್ಟದ ಸಲಹಾ ಸಮಿತಿ:**

| | | |
|---|---|---|
| 1) | ಗ್ರಾಮ ಪಂಚಾಯತ್ ಅಧ್ಯಕ್ಷರು | ಅಧ್ಯಕ್ಷರು |
| 2) | ಸ್ಥಳೀಯ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಯ ಮುಖ್ಯೋಪಾಧ್ಯಾಯರು | ಸದಸ್ಯರು |
| 3) | ಗ್ರಂಥಾಲಯ ಮೇಲ್ವಿಚಾರಕರು | ಸದಸ್ಯರು |
| 4) | ಸ್ಥಳೀಯ ಯುವತಿ ಮಂಡಳಿಯ ಪ್ರತಿನಿಧಿ | ಸದಸ್ಯರು |
| 5) | ಸ್ಥಳೀಯ ಯುವಕ ಮಂಡಳಿಯ ಪ್ರತಿನಿಧಿ | ಸದಸ್ಯರು |
| 6) | ಹಿರಿಯ ನಾಗರೀಕರು | ಸದಸ್ಯರು |
| 7) | ಸ್ಥಳೀಯ ಶಿಕ್ಷಣ ತಜ್ಞರು | ಸದಸ್ಯರು |
| 8) | ಸ್ಥಳೀಯ ಬರಹಗಾರರು, ಸಾಹಿತಿಗಳು, ಕವಿಗಳು ಮತ್ತು ಪತ್ರಕರ್ತರು | ಸದಸ್ಯರು |
| 9) | ಹೈಸ್ಕೂಲ್ ಹಾಗು ಕಾಲೇಜು ವಿದ್ಯಾರ್ಥಿಗಳು-2ಹೆಣ್ಣು ಮಕ್ಕಳು ಹಾಗು ಇಬ್ಬರು ಗಂಡು ಮಕ್ಕಳು | ಸದಸ್ಯರು |
| 10) | ಗ್ರಾಮ ಪಂಚಾಯಿತಿ ಕೌಶಲ್ಯಾಭಿವೃದ್ದಿ ತರಬೇತಿ ಹೊಂದಿರುವ ಪ್ರತಿನಿಧಿ | ಸದಸ್ಯರು |
| 11) | ರೈತ ಪ್ರತಿನಿಧಿ | ಸದಸ್ಯರು |
| 12) | ಗ್ರಾಮ ಪಂಚಾಯಿತಿ ಮಟ್ಟ ಒಕ್ಕೂಟದ ಪ್ರತಿನಿಧಿ | ಸದಸ್ಯರು |
| 13) | ಗ್ರಾಮ ಪಂಚಾಯತ್ ಅಭಿವೃದ್ದಿ ಅಧಿಕಾರಿ | ಸದಸ್ಯ ಕಾರ್ಯದರ್ಶಿ |

ಗ್ರಾಮ ಪಂಚಾಯಿತಿ ಮಟ್ಟದ ಸಲಹಾ ಸಮಿತಿ ಕ್ರಮ ಸಂಖ್ಯೆ: 4 ರಿಂದ 12 ರ ವರೆಗೆ ಸಂಬಂಧಿಸಿದಂತೆ ಸದಸ್ಯರುಗಳನ್ನು ಗ್ರಾಮ ಸಭೆಯಲ್ಲಿ ಚರ್ಚಿಸಿ ಆಯ್ಕೆ ಮಾಡಿ ತದನಂತರ ಗ್ರಾಮ ಪಂಚಾಯಿತಿ ಸಾಮಾನ್ಯ ಸಭೆ ಅನುಮೋದನೆ ಪಡೆಯುವುದು,

ಮೇಲಿನಂತೆ ರಚಿಸಲಾದ ಜಿಲ್ಲಾ ಮಟ್ಟದ ಸಮಿತಿಯು ಕನಿಷ್ಠ ತಿಂಗಳಿಗೊಮ್ಮೆ ಸಭೆ ಸೇರಿ ಗ್ರಾಮ ಪಂಚಾಯತ್ ಗ್ರಂಥಾಲಯಗಳ ಪುಸ್ತಕ ಆಯ್ಕೆ ಮತ್ತು ಖರೀದಿ ಹಾಗೂ ಸಲಹಾ ಸಮಿತಿಯ ಸರ್ವಾಂಗೀಣ ಅಭಿವೃದ್ಧಿಗೆ ಸೂಕ್ತ ಶಿಫಾರಸ್ಸುಗಳನ್ನು ನೀಡುವುದು. ಗ್ರಾಮ ಪಂಚಾಯತ್ ಮಟ್ಟದ ಸಮಿತಿಗಳು ಕನಿಷ್ಠ ತಿಂಗಳಿಗೊಮ್ಮೆ ಸಭೆ ಸೇರಿ ಗ್ರಾಮ ಪಂಚಾಯಿತಿ ಗ್ರಂಥಾಲಯಗಳ ಸರ್ವಾಂಗೀಣ ಅಭಿವೃದ್ಧಿ ಹಾಗೂ ಪರಿಣಾಮಕಾರಿ ನಿರ್ವಹಣೆಗೆ ಬೇಕಾದ ಕ್ರಮಗಳನ್ನು ಕೈಗೊಳ್ಳಲು ಅಗತ್ಯಪಡಿಸಬಹುದು.

**ಜಿಲ್ಲಾ ಮಟ್ಟದ ಪುಸ್ತಕ ಆಯ್ಕೆ ಮತ್ತು ಖರೀದಿ ಹಾಗೂ ಸಲಹಾ ಸಮಿತಿಯ ಜವಾಬ್ದಾರಿಗಳು:**

1. ಗ್ರಂಥಾಲಯದ ಅಭಿವೃದ್ಧಿಗೆ ಪೂರಕ ಸಲಹೆ ಸೂಚನೆಗಳನ್ನು ನೀಡುವುದು.
2. ಗ್ರಂಥಾಲಯಗಳಲ್ಲಿ ಯಾವ ಪುಸ್ತಕಗಳು ಇರಬೇಕೆಂಬ ಬಗ್ಗೆ ಸಲಹೆ ನೀಡುವುದು ಹಾಗೂ ಪುಸ್ತಕಗಳ ಆಯ್ಕೆ ಮಾಡುವುದು ಮತ್ತು ಖರೀದಿ ಪ್ರಕ್ರಿಯೆಗೆ ಸೂಕ್ತ ನಿರ್ದೇಶನ/ಮಾರ್ಗದರ್ಶನ ನೀಡುವುದು.
3. ಗ್ರಂಥಾಲಯಗಳನ್ನು ಡಿಜಿಟಲ್ ಮಾಡಿ ಯಾವ ಮಾಹಿತಿಗಳು ಇರಬೇಕೆಂಬ ಬಗ್ಗೆ ಸಲಹೆ ನೀಡುವುದು.
4. ಗ್ರಂಥಾಲಯಗಳಲ್ಲಿ ಓದುಗರ ಸಂಖ್ಯೆಯನ್ನು ಹೆಚ್ಚಿಸಲು ಯಾವ ಕ್ರಮಗಳನ್ನು ಕೈಗೊಳ್ಳಬೇಕೆಂಬ ಬಗ್ಗೆ ಸಲಹೆ ನೀಡುವುದು.
5. ಗ್ರಂಥಾಲಯಗಳಲ್ಲಿ ಓದುಗರ ಜೊತೆ ವಿಷಯವಾರು ಸಂವಾದ ಕಾರ್ಯಕ್ರಮ ಏರ್ಪಡಿಸುವ ಬಗ್ಗೆ ಸಲಹೆ ನೀಡುವುದು.
6. ಗ್ರಂಥಾಲಯದ ಮೇಲ್ವಿಚಾರಕರಿಗೆ ತರಬೇತಿ ವ್ಯವಸ್ಥೆಗೆ ಸಲಹೆ ನೀಡುವುದು.

**ಗ್ರಾಮ ಪಂಚಾಯತ್ ಗ್ರಂಥಾಲಯಗಳ ಸಲಹಾ ಸಮಿತಿ ಜವಾಬ್ದಾರಿಗಳು:**

1. ಗ್ರಂಥಾಲಯಕ್ಕೆ ಸಮರ್ಪಕ ಕಟ್ಟಡದ ವ್ಯವಸ್ಥೆ ಕಲ್ಪಿಸುವುದು..
2. ಗ್ರಂಥಾಲಯಕ್ಕೆ ಅವಶ್ಯಕ ಪೀಠೋಪಕರಣಗಳು ಲಭ್ಯವಿರುವಂತೆ ಮಾಡುವುದು.
3. ಜಿಲ್ಲಾ ಮಟ್ಟದ ಪುಸ್ತಕ ಆಯ್ಕೆ ಮತ್ತು ಖರೀದಿ ಹಾಗೂ ಸಲಹಾ ಸಮಿತಿಯ ಶಿಫಾರಸ್ಸಿನ ಅನ್ವಯ ಗ್ರಂಥಾಲಯಕ್ಕೆ ಬೇಕಾದ ಪುಸ್ತಕಗಳನ್ನು ಒದಗಿಸಲು ಕ್ರಮ ಕೈಗೊಳ್ಳುವುದು.
4. ಗ್ರಂಥಾಲಯಕ್ಕೆ ಬೇಕಾದ ದಿನಪತ್ರಿಕೆಗಳು, ನಿಯತಕಾಲಿಕೆಗಳು ಲಭ್ಯವಿರುವಂತೆ ಮಾಡಿ ಅವುಗಳಿಗೆ ಭರಿಸಬೇಕಾದ ಮೊತ್ತವನ್ನು ಪಾವತಿಸುವಂತೆ ಪರಿಶೀಲಿಸುವುದು.

5. ಗ್ರಂಥಾಲಯಕ್ಕೆ ಬೇಕಾದ ಕಂಪ್ಯೂಟರ್‌ಗಳು ಲಭ್ಯವಿರುವಂತೆ ಮಾಡುವುದು.
6. ಗ್ರಂಥಾಲಯ ಉಪಕರದ ಜಮಾ ಖರ್ಚಿನ ವಿವರಗಳ ಮೇಲ್ವಿಚಾರಣೆ ಮಾಡುವುದು.
7. ಗ್ರಂಥಾಲಯಗಳಲ್ಲಿ ಉದ್ಯೋಗ ಮಾಹಿತಿ ದೊರಕುವಂತೆ ಮಾಡುವುದು.
8. ಗ್ರಂಥಾಲಯಗಳಲ್ಲಿ ಓದುಗರೊಡನೆ ವಿಷಯವಾರು ಸಂವಾದ ಏರ್ಪಡಿಸುವುದು.
9. ಗ್ರಂಥಾಲಯಗಳಲ್ಲಿ ಸ್ಥಳೀಯ ಸಾಹಿತಿಗಳು, ಕ್ರೀಡಾಪಟುಗಳು ಹಾಗೂ ಇನ್ನಿತರೆ ಕ್ಷೇತ್ರಗಳ ಸಾಧಕರಿಂದ ಉಪನ್ಯಾಸ ಏರ್ಪಡಿಸುವುದು.
10. ಗ್ರಂಥಾಲಯಗಳ ಓದುಗರಿಗಾಗಿ, ಮುಖ್ಯವಾಗಿ ಮಕ್ಕಳಿಗಾಗಿ ವಿವಿಧ ಸ್ಪರ್ಧಾ ಚಟುವಟಿಕೆ ಏರ್ಪಡಿಸಿ, ವಿಜೇತರಿಗೆ ಬಹುಮಾನ ವ್ಯವಸ್ಥೆ ಕಲ್ಪಿಸುವುದು.
11. ಒಟ್ಟಾರೆ ಗ್ರಂಥಾಲಯಗಳನ್ನು ಸ್ಥಳೀಯ ಜನರಿಗೆ ಅಂದರೆ, ಯುವಕರು, ಯುವತಿಯರು, ಗೃಹಣಿಯರು, ಹಿರಿಯ ನಾಗರೀಕರು, ರೈತರು, ವರ್ತಕರು, ಮುಂತಾಗಿ ಸರ್ವರಿಗೂ ಉಪಯುಕ್ತವಾಗುವಂತೆ ಮಾಡುವುದು.

**ಗ್ರಾಮ ಪಂಚಾಯಿತಿ ಗ್ರಂಥಾಲಯಗಳ ನಿರ್ವಹಣೆಗೆ ಅನುದಾನ:**

1. ಗ್ರಾಮ ಪಂಚಾಯಿತಿಗಳು ಆಸ್ತಿ ತೆರಿಗೆ ಜೊತೆ ಸಂಗ್ರಹಿಸುವ ಗ್ರಂಥಾಲಯ ಉಪಕರದ ಹಣ ಬಳಸಿಕೊಳ್ಳುವುದು.
2. ಗ್ರಾಮ ಪಂಚಾಯಿತಿಗಳು ಸ್ವಂತ ಸಂಪನ್ಮೂಲದಿಂದ ಬಳಸಿಕೊಳ್ಳುವುದು.
3. ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ದಾನಿಗಳಿಂದ ಹಣ, ಪುಸ್ತಕ, ಕಂಪ್ಯೂಟರ್, ಪೀಠೋಪಕರಣ ರೂಪದಲ್ಲಿ ನೆರವು ಪಡೆಯುವುದು.

ಗ್ರಾಮ ಪಂಚಾಯತ್ ಮಟ್ಟದ ಸಲಹಾ ಸಮಿತಿಗಳ ಕಾರ್ಯಚಟುವಟಿಕೆಗಳಿಗೆ ತಗಲುವ ಸಾಂದರ್ಭಿಕ ವೆಚ್ಚಗಳನ್ನು ಗ್ರಾಮ ಪಂಚಾಯತ್ ನಿಧಿಯಿಂದ ಭರಿಸಬಹುದಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

**(ವೈ.ಎಂ. ಮಹಮ್ಮದ್ ಯೂಸುಫ್)**
ನಿರ್ದೇಶಕರು (ಪಂ.ರಾಜ್) ಮತ್ತು
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
14/7/23

**<u>ಇವರಿಗೆ</u>**

1. ನಿರ್ದೇಶಕರು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
2. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಮೈಸೂರು.
3. ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ, ಬೆಂಗಳೂರು.
4. ನಿರ್ದೇಶಕರು, ಲೋಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.
5. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ.
6. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ(ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ)
7. ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ (ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ)
8. ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿ ಗ್ರಂಥಾಲಯ ಮೇಲ್ವಿಚಾರಕರುಗಳಿಗೆ(ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಮುಖಾಂತರ)

<u>ಪ್ರತಿಯನ್ನು:</u>

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಯವರಿಗೆ.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಯವರಿಗೆ.
4. ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು ಇವರ ಆಪ್ತ ಸಹಾಯಕರಿಗೆ.
5. ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್‌ಸೈಟ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
6. ಕಛೇರಿ ಪ್ರತಿ.